# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಗುರುವಾರ, ದಿನಾಂಕ:22ನೇ ಫೆಬ್ರವರಿ, 2024

## (ಸಮಯ: ಬೆಳಗ್ಗೆ: 10.30 ಗಂಟೆಗೆ)

* * *

### 01. ಸಂತಾಪ ಸೂಚನೆ

### 02. ವಿತ್ತೀಯ ಕಾರ್ಯಕಲಾಪ

ಅ. **ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

2023–2024ನೇ ಸಾಲಿನ ಪೂರಕ ಅಂದಾಜು(ಎರಡನೇ ಹಾಗೂ ಅಂತಿಮ ಕಂತು)ಗಳನ್ನು ಸಭೆಯ ಮುಂದಿಡುವುದು.

ಆ. 2024–25ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಸಾಮಾನ್ಯ ಚರ್ಚೆ

**ಎರಡನೇ ದಿನ**

### 03. ಅರ್ಜಿಗಳನ್ನೊಪ್ಪಿಸುವುದು

**ಅ.** **ಶ್ರೀ ಡಿ.ಎಸ್. ಅರುಣ್** ಅವರು ಬೆಂಗಳೂರು ನಗರದ ಸಂಜಯನಗರದಲ್ಲಿರುವ, ಕರ್ನಾಟಕ ಪೋಸ್ಟಲ್ & ಟೆಲಿಕಾಂ ಎಂಪ್ಲಾಯೀಸ್ ಹೌಸಿಂಗ್ ಕೋ–ಆಪರೇಟಿವ್ ಸೊಸೈಟಿ ಲಿ., ಈ ಸಂಘದಲ್ಲಿ ಮಧ್ಯಮ ವರ್ಗದ ಜನತೆ ನಿವೇಶನಕ್ಕೆ ಬಂಡವಾಳ ಹೂಡಿ ತೊಂದರೆಯಲ್ಲಿ ಸಿಲುಕಿರುವ ಕುರಿತು ಅರ್ಜಿಯನ್ನೊಪ್ಪಿಸುವುದು.

**ಆ.** **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಕದಂಬ ಬಡಾವಣೆ ಕ್ಷೇಮಾಭಿವೃದ್ಧಿ ಹಾಗೂ ಸಾಂಸ್ಕೃತಿಕ ಸಂಘ(ರಿ) ಲಿಂಗಧೀರನಹಳ್ಳಿ, ಬೆಂಗಳೂರು–85, ಡಿ–ಗ್ರೂಪ್ ನೌಕರರ ಬಡಾವಣೆಯ ನಿವಾಸಿಗಳು ಸಲ್ಲಿಸಿರುವ ಅರ್ಜಿಯಲ್ಲಿ ಶ್ರೀ ತಿರುಮಲ ಕಾಂಪ್ಲೆಕ್ಸ್ ಕಟ್ಟಡದ ಮೇಲೆ ಅಳವಡಿಸಿರುವ ಮೊಬೈಲ್ ಟವರ್‌ನ್ನು ತೆರವುಗೊಳಿಸುವ ಕುರಿತು ಅರ್ಜಿಯನ್ನೊಪ್ಪಿಸುವುದು.

### 04. ವರದಿಗಳನ್ನೊಪ್ಪಿಸುವುದು

ಅ. **ಶ್ರೀ ಎಂ.ಕೆ. ಪ್ರಾಣೇಶ್(ಅಧ್ಯಕ್ಷರು ಹಾಗೂ ಮಾನ್ಯ ಉಪ ಸಭಾಪತಿಗಳು, ಅರ್ಜಿಗಳ ಸಮಿತಿ)** ಅವರು ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ 2022–23ನೇ ಸಾಲಿನ ಮೂವತ್ತನೇ ವರದಿಯನ್ನೊಪ್ಪಿಸುವುದು.

ಆ. **ಶ್ರೀ ಅರವಿಂದ ಕುಮಾರ್ ಅರಳಿ(ಸದಸ್ಯರು, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2023–24ನೇ ಸಾಲಿನ ಎರಡನೇ ವರದಿಯನ್ನೊಪ್ಪಿಸುವುದು.

## 05. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕ, 2024
**ಶ್ರೀ ಡಿ.ಕೆ. ಶಿವಕುಮಾರ್ (ಮಾನ್ಯ ಉಪ ಮುಖ್ಯಮಂತ್ರಿಗಳು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ, 2024
**ಶ್ರೀ ಬಿ.ಎಸ್. ಸುರೇಶ್ (ಮಾನ್ಯ ನಗರಾಭಿವೃದ್ಧಿ ಸಚಿವರು)**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2024
**ಶ್ರೀ ಪ್ರಿಯಾಂಕ ಖರ್ಗೆ (ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2024
**ಶ್ರೀ ಕ್ಯಾತಸಂದ್ರ ರಾಜಣ್ಣ (ಮಾನ್ಯ ಸಹಕಾರ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## ೦೬. ಸದಸ್ಯರ ಖಾಸಗಿ ಕಾರ್ಯಕಲಾಪಗಳು

### ಖಾಸಗಿ ನಿರ್ಣಯ

ರಾಜ್ಯದಲ್ಲಿರುವ ರಾಜ್ಯ ಮತ್ತು ಕೇಂದ್ರ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಹಾಗೂ ಸರ್ಕಾರೇತರ ಸಂಸ್ಥೆಗಳಲ್ಲಿ "ಸಿ" ಮತ್ತು "ಡಿ" ದರ್ಜೆಯ ಹುದ್ದೆಗಳನ್ನು ಸ್ಥಳೀಯರಿಗೆ ಮೀಸಲಿಡುವ ಕುರಿತಂತೆ ಸಂವಿಧಾನಕ್ಕೆ ತಿದ್ದುಪಡಿ ತರುವ ಉದ್ದೇಶದ ಕುರಿತು **ಶ್ರೀ ಯು.ಬಿ. ವೆಂಕಟೇಶ್** ಅವರು ಮಂಡಿಸಿರುವ ನಿರ್ಣಯದ ಮೇಲೆ ಚರ್ಚೆ.

## 07. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

**ತಡೆಹಿಡಿಯಲಾದ ಪ್ರಶ್ನೆ:** ಮಾನ್ಯ ಗೃಹ ಸಚಿವರು

3ನೇ ಪಟ್ಟಿಯಿಂದ ತಡೆಹಿಡಿಯಲಾದ
**ಶ್ರೀ ಡಿ.ಎಸ್. ಅರುಣ್** ಅವರ ಚುಕ್ಕೆ
ಗುರುತಿನ ಪ್ರಶ್ನೆ ಸಂಖ್ಯೆ: 32(366)

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

## 08. ಶೂನ್ಯವೇಳೆ ಪ್ರಸ್ತಾವಗಳು

## 09. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಯು.ಬಿ. ವೆಂಕಟೇಶ್** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್ ಪಾವತಿಯಾಗಿರುವುದರಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀಯುತರುಗಳಾದ ವೈ.ಎಂ. ಸತೀಶ್, ಡಿ.ಎಸ್. ಅರುಣ್, ಕೆ.ಎಸ್. ನವೀನ್ ಹಾಗೂ ಎಸ್. ರುದ್ರೇಗೌಡ** ಅವರುಗಳು ತುಂಗಭದ್ರಾ ನದಿಯಲ್ಲಿ ಹಾನಿಕಾರಕ ಲೋಹಗಳು ಪತ್ತೆಯಾಗಿದ್ದು, ಕಲುಷಿತ ನೀರು ಕುಡಿಯಲು ಮತ್ತು ಕೃಷಿಗೆ ಬಳಸಲು ಯೋಗ್ಯವಲ್ಲದಿರುವುದರಿಂದ ಶುದ್ಧೀಕರಿಸಲು ಕ್ರಮ ಕೈಗೊಳ್ಳುವ ಕುರಿತು ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

03. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಕ್ರೀಡಾ ಪ್ರಾಧಿಕಾರದಲ್ಲಿ ಸಂಚಿತ ವೇತನದ ಆಧಾರದ ಮೇಲೆ 15 ರಿಂದ 30 ವರ್ಷಗಳವರೆಗೆ ಕಾರ್ಯನಿರ್ವಹಿಸುತ್ತಿರುವ ಸುಮಾರು 85 ಕ್ರೀಡಾ ತರಬೇತುದಾರರನ್ನು ಖಾಯಂಗೊಳಿಸುವ/ಕ್ರೀಡಾ ಇಲಾಖೆಯಲ್ಲಿ ವಿಲೀನಗೊಳಿಸುವ ಕುರಿತು ಮಾನ್ಯ ಯುವಜನ ಸೇವೆಗಳು, ಕ್ರೀಡೆಗಳು ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

04. **ಶ್ರೀ ಬಿ.ಎಂ. ಫಾರೂಖ್** ಅವರು ತುಳು ಭಾಷೆಯನ್ನು ಕರ್ನಾಟಕ ರಾಜ್ಯದ ಎರಡನೇ ಭಾಷೆಯನ್ನಾಗಿ ಘೋಷಿಸಿ ಭಾರತ ಸಂವಿಧಾನದ 8ನೇ ಪರಿಚ್ಛೇದದಲ್ಲಿ ಸೇರ್ಪಡೆ ಮಾಡುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

05. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ರಘುನಾಥ್ ರಾವ್ ಮಲ್ಕಾಪೂರೆ, ಎಂ.ಎಲ್. ಅನಿಲ್ ಕುಮಾರ್, ದಿನೇಶ್ ಗೂಳಿಗೌಡ, ಸುನೀಲ್ ವಲ್ಯಾಪುರ್, ಮರಿತಿಬ್ಬೇಗೌಡ ಹಾಗೂ ಇತರರು** ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಸುಂಕದಕಟ್ಟೆ ಗ್ರಾಮದ ಸರ್ವೆ ನಂ.37 ಮತ್ತು ನೆಟ್ಟಿಗೆರೆ ಗ್ರಾಮದ ಸರ್ವೆ ನಂ.42ಕ್ಕೆ ಸಂಬಂಧಿಸಿದಂತೆ ಪೋಡಿ ದುರಸ್ಥಿ ಬಗ್ಗೆ ಸ್ಥಳೀಯ ಅರಣ್ಯ ವ್ಯವಸ್ಥಾಪನಾ ಅಧಿಕಾರಿಗಳು ವಿಚಾರಣೆ ನಡೆಸಿ, ಆದೇಶ ಹೊರಡಿಸಲಾಗಿದ್ದರೂ ಅಂದಿನ ಎ.ಸಿ.ಎಫ್. ಅವರು ಸುಳ್ಳು ದಾಖಲಾತಿಗಳನ್ನು ಸೃಷ್ಟಿಸಿ ವಿನಾಕಾರಣ ಕಿರುಕುಳ ನೀಡುತ್ತಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 10. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಕೆ.ಎಸ್. ನವೀನ್, ಕೇಶವ ಪ್ರಸಾದ್ ಎಸ್, ಡಿ.ಎಸ್. ಅರುಣ್ ಹಾಗೂ ಹೆಚ್.ಎಸ್. ಗೋಪಿನಾಥ್** ಅವರುಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಿವಿಧ ಮೂಲಗಳಿಂದ ಸಂಗ್ರಹವಾಗುವ ತೆರಿಗೆ ಹಾಗೂ ಆದಾಯ ಸೇರಿದಂತೆ ಬೆಂಗಳೂರಿನಲ್ಲಿ ಸಂಗ್ರಹವಾಗುವ ಜಿ.ಎಸ್.ಟಿ. ತೆರಿಗೆಯಲ್ಲಿನ ಖರ್ಚು/ವೆಚ್ಚಗಳ ಸಮಗ್ರ ಚಿತ್ರಣದ ಬಗ್ಗೆ ಶ್ವೇತಪತ್ರ ಹೊರಡಿಸುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ ಹಾಗೂ ಮಧು ಜಿ. ಮಾದೇಗೌಡ** ಅವರುಗಳು ಸರ್ಕಾರಿ ಹಾಗೂ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರುಗಳಿಗೆ 6 ಮತ್ತು 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ಬಾಕಿಯನ್ನು ಪಾವತಿಸದಿರುವುದು ಹಾಗೂ ಪಾಲಿಟೆಕ್ನಿಕ್‌ಗಳ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿಯಾಗದಿರುವ ಕಾರಣ ಪ್ರಾಂಶುಪಾಲರ ಹುದ್ದೆಗಳು ಖಾಲಿಯಿರುವುದರಿಂದ ಉಂಟಾಗಿರುವ ಗಂಭೀರ ಪರಿಸ್ಥಿತಿಯ ಕುರಿತು ಪ್ರಸ್ತಾಪಿಸುವುದು.

೦೩. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ಟರ್ಫ್ ಕ್ಲಬ್‌ನವರು ನೂರಾರು ಕೋಟಿ ರೂಪಾಯಿಗಳ ತೆರಿಗೆಯನ್ನು ಪಾವತಿಸದೆ ಸರ್ಕಾರಕ್ಕೆ ವಂಚಿಸಿರುವ ಕುರಿತು ಪ್ರಸ್ತಾಪಿಸುವುದು.

೦೪. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಧಾನಸೌಧ, ವಿಕಾಸಸೌಧ ಮತ್ತು ಶಾಸಕರ ಭವನದ ಆವರಣದಲ್ಲಿ ವಿಶ್ವಕರ್ಮ ಸಮಾಜದ ಭಗವಾನ್ ವಿಶ್ವಕರ್ಮ ಅಥವಾ ಅಮರಶಿಲ್ಪಿ ಜಕಣಾಚಾರಿ ಪ್ರತಿಮೆಯನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸುವುದು.

## 11. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ಅಧ್ಯಕ್ಷ/ಉಪಾಧ್ಯಕ್ಷ ಮೀಸಲಾತಿ ಬಗ್ಗೆ ದಿನಾಂಕ:13.02.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:01(60)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಶನಿವಾರ ಸಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಐದು ದಶಕಗಳಿಂದ ಪ್ಲಾಸ್ಟಿಕ್ ಗುಡಿಸಲಿನಲ್ಲಿ ವಾಸ ಮಾಡುತ್ತಿರುವ ಹಾವಾಡಿಗ ಜನಾಂಗದ ಬಗ್ಗೆ ದಿನಾಂಕ:14.02.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:26(103)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**